# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 565

ಸದಸ್ಯರ ಹೆಸರು : ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 09.03.2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ನೀಡುತ್ತಿರುವ ಸ್ವವಲತ್ತುಗಳು ಏನು; | ಸರ್ಕಾರ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ನೀಡುತ್ತಿರುವ ಸವಲತ್ತುಗಳು ಈ ಕೆಳಕಂಡಂತಿವೆ:-<br>1) ಉಚಿತ ಪಠ್ಯಪುಸ್ತಕ<br>2) ಉಚಿತ ಅಭ್ಯಾಸ ಪುಸ್ತಕ<br>3) ನಲಿ-ಕಲಿ ಕಿಟ್<br>4) ಉಚಿತ ಸಮವಸ್ತ್ರ<br>5) ಉಚಿತ ಶೂ ಸಾಕ್ಸ್<br>6) ಉಚಿತ ಬೈಸಿಕಲ್ (8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾತ್ರ)<br>7) ಮಧ್ಯಾಹ್ನದ ಬಿಸಿಯೂಟ<br>8) ಕ್ಷೀರಭಾಗ್ಯ ಯೋಜನೆ<br>9) ಕಬ್ಬಿಣಾಂಶವಿರುವ ಮಾತ್ರೆಗಳು<br>10) ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಎನ್.ಟಿ.ಎಸ್.ಸಿ ಮತ್ತು ಎನ್.ಎಂ.ಎಂ.ಎಸ್ ವಿದ್ಯಾರ್ಥಿ ವೇತನ<br>11) ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಇನ್‌ಸ್ಪೈರ್ ಅವಾರ್ಡ್ ಪ್ರೋತ್ಸಾಹಧನ<br>12) ಪ್ರತಿಭಾ ಕಾರಂಜಿ<br>13) ಆರ್.ಟಿ.ಇ ಶುಲ್ಕ ಮರುಪಾವತಿ<br>14) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತ್ಯಂತ ಹೆಚ್ಚು ಅಂಕ ಪಡೆದ ಜಿಲ್ಲಾ ಮಟ್ಟದ 3 ವಿದ್ಯಾರ್ಥಿಗಳಿಗೆ ಮತ್ತು ತಾಲ್ಲೂಕು ಮಟ್ಟದ 3 ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಲಾಗುತ್ತದೆ. |
| ಆ) | ಇದೇ ಸವಲತ್ತುಗಳನ್ನು ಖಾಸಗಿ ಅನುದಾನಿತ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೂ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು? | ಈಗಾಗಲೇ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ ಯೋಜನೆ, ಉಚಿತ ಪಠ್ಯ ಪುಸ್ತಕ ಮತ್ತು ಉಚಿತ ಬೈಸಿಕಲ್ ಯೋಜನೆಗಳನ್ನು ಅನುದಾನಿತ ಶಾಲೆಗಳ ಮಕ್ಕಳಿಗೂ ವಿಸ್ತರಿಸಲಾಗಿರುತ್ತದೆ. ಮುಂದುವರೆದು, ಸರ್ಕಾರಕ್ಕೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುವುದರಿಂದ ಸಮವಸ್ತ್ರ ಮತ್ತು ಶೂ-ಸಾಕ್ಸ್ ಯೋಜನೆಗಳನ್ನು ಸರ್ಕಾರಿ ಶಾಲಾ ಮಕ್ಕಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ. |

ಇಪಿ 58 ಯೋಯೋಕ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು